377(939) ಶ್ರೀ ವೈಜ್ಯನಾಥ ಪಾಟೀಲ್ (ಚಿಂಚೋಳಿ): ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕರ್ನಾಟಕವನ್ನು ಭಾರತ ಸಂವಿಧಾನದ 371ನೆಯ ಅನುಚ್ಛೇದದಡಿಯಲ್ಲಿ ಸೇರಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ;

ಆ) ಇದ್ದಲ್ಲಿ, ಈ ಬಗ್ಗೆ ಇಲ್ಲಿಯವರೆಗೆ ಕೈಗೊಂಡಿರುವ ಕ್ರಮಗಳೇನು;

ಇ) ಈ ವಿಷಯದಲ್ಲಿ ಕೇಂದ್ರ ಸರ್ಕಾರದೊಂದಿಗೆ ನಡೆದಿರುವ ಚರ್ಚೆ ಮತ್ತು ಪತ್ರ ವ್ಯವಹಾರಗಳೇನು (ಪೂರ್ಣ ಮಾಹಿತಿಯನ್ನು ನೀಡುವುದು)

ಶ್ರೀ ಧರ್ಮಸಿಂಗ್ (ಮುಖ್ಯಮಂತ್ರಿಗಳು):

ಅ) ಆಂಧ್ರಪ್ರದೇಶಕ್ಕೆ ಸಂಬಂಧಿಸಿದಂತೆ ಭಾರತ ಸಂವಿಧಾನದ ಅನುಚ್ಛೇದ 371-ಡಿ ಅಡಿಯಲ್ಲಿ ನೀಡಿರುವ ಸೌಲಭ್ಯದಂತೆ, ಕರ್ನಾಟಕ ರಾಜ್ಯದಲ್ಲೂ ಉದ್ಯೋಗ ಮತ್ತು ಶೈಕ್ಷಣಿಕ ಪ್ರವೇಶದಲ್ಲಿ ಪ್ರದೇಶವಾರು ಮೀಸಲಾತಿ ನೀಡುವ ಸಲುವಾಗಿ ಸೂಕ್ತ ಅವಕಾಶ ಕಲ್ಪಿಸಬೇಕೆಂದು ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿತ್ತು. ಕೇಂದ್ರ ಸರ್ಕಾರವು ಈ ಸಂಬಂಧ ಬಯಸಿದ್ದ ಹೆಚ್ಚಿನ ಮಾಹಿತಿಯನ್ನು ಸಹ ಒದಗಿಸಲಾಗಿತ್ತು. ಪ್ರಸ್ತಾವನೆಯನ್ನು ಪರಿಶೀಲಿಸಿದ ನಂತರ ಕೇಂದ್ರ ಸರ್ಕಾರವು 1973 ರಲ್ಲಿ ಆಂಧ್ರಪ್ರದೇಶಕ್ಕೆ ಸಂಬಂಧಿಸಿದಂತೆ ಅನುಚ್ಛೇದ 371 'ಡಿ' ಯನ್ನು ಅಳವಡಿಸಿದ ಸಂದರ್ಭದಲ್ಲಿ ಆಂಧ್ರಪ್ರದೇಶದಲ್ಲಿ ಇದ್ದ ಪರಿಸ್ಥಿತಿಯು ಕರ್ನಾಟಕ ರಾಜ್ಯದಲ್ಲಿ ಇಲ್ಲದಿರುವ ಪ್ರಯುಕ್ತ ರಾಜ್ಯದ ಪ್ರಸ್ತಾವನೆಯನ್ನು ಪರಿಗಣಿಸಲು ಸಾಧ್ಯವಾಗುವುದಿಲ್ಲವೆಂದು ದಿನಾಂಕ 22-11-2002ರ ಪತ್ರದಲ್ಲಿ ತಿಳಿಸಿದೆ, ತದನಂತರ ದಿನಾಂಕ 24-4-2003ರಂದು ಮಾನ್ಯ ಮುಖ್ಯಮಂತ್ರಿಯವರ ಅಧ್ಯಕ್ಷತೆಯಲ್ಲಿ ಸರ್ವ ಪಕ್ಷಗಳ ನಿಯೋಗವು ಹಿಂದಿನ ಪ್ರಧಾನ ಮಂತ್ರಿ ಮತ್ತು ಉಪ ಪ್ರಧಾನ ಮಂತ್ರಿಗಳನ್ನು ಭೇಟಿ ಮಾಡಿ ಮನವಿಯನ್ನು (Memorandum) ಸಲ್ಲಿಸಿ ರಾಜ್ಯ ಸರ್ಕಾರದ ಪ್ರಸ್ತಾವನೆಯನ್ನು ಮತ್ತೆ ಪರಿಗಣಿಸಬೇಕೆಂದು ಕೋರಿರುತ್ತದೆ. ಈ ಸಂಬಂಧ ಕೇಂದ್ರ ಸರ್ಕಾರವು ಬಯಸಿದ ಹಾಗೆ ಡಾ:ನಂಜುಂಡಪ್ಪ ಸಮಿತಿಯ ವರದಿಯನ್ನು ಸಹ ಒದಗಿಸಲಾಗಿದೆ. ಅಲ್ಲದೇ, ದಿನಾಂಕ: 23-8-2004ರಂದು ಪುನಃ ಮಾನ್ಯ ಮುಖ್ಯ ಮಂತ್ರಿಯವರ ನೇತೃತ್ವದಲ್ಲಿ ಸರ್ವ ಪಕ್ಷಗಳ ಮುಖಂಡರುಗಳನ್ನೊಳಗೊಂಡ ನಿಯೋಗವು ಕೇಂದ್ರ ಸರ್ಕಾರದ ಗೃಹ ಸಚಿವರನ್ನು ಭೇಟಿ ಮಾಡಿ ಮತ್ತೊಂದು ಮನವಿಯನ್ನು (Memorandum) ಸಲ್ಲಿಸಿರುತ್ತದೆ. ಪ್ರಸ್ತುತ ವಿಷಯವು ಕೇಂದ್ರ ಸರ್ಕಾರದ ಪರಿಶೀಲನೆಯಲ್ಲಿದೆ.

378(691) ಶ್ರೀ ವೀರ್ ಬಸವಂತರೆಡ್ಡಿ ಮುದ್ನಾಳ್ (ಯಾದಗಿರಿ): ಮಾನ್ಯ ಪೌರಾಡಳಿತ ಹಾಗೂ ಕೆ.ಯು.ಐ.ಡಿ.ಎಫ್.ಸಿ. ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಯಾದಗಿರಿ ಪಟ್ಟಣವನ್ನು ಕೆ.ಯು.ಐ.ಡಿ.ಎಫ್.ಸಿ.ಗೆ ಸೇರಿಸಲಾಗಿದೆಯೇ;

ಆ) ಹಾಗಿದ್ದಲ್ಲಿ, ಇವುಗಳ ಕೆಲಸವನ್ನು ಯಾವಾಗ ಪ್ರಾರಂಭಿಸಲಾಗುವುದು;

ಇ) ಇಲ್ಲದಿದ್ದಲ್ಲಿ, ಕೆ.ಯು.ಐ.ಡಿ.ಎಫ್.ಸಿ. ಗೆ ಸೇರಿಸಿ, ಮೂಲಭೂತ ಸೌಕರ್ಯಗಳನ್ನು ಯಾದಗಿರಿ ಪಟ್ಟಣಕ್ಕೆ ಒದಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳಾವುವು?